ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE : 4/11/20

# ಹೊಸ ಸಂಸತ್ ಭವನದಿಂದ 1,000 ಕೋಟಿ ಉಳಿತಾಯ



**ಹೊಸದಿಲ್ಲಿ:** ಹೊಸ ಸಂಸತ್ ಭವನ ನಿರ್ಮಾಣದಿಂದ ಬಾಡಿಗೆ ರೂಪದಲ್ಲಿ ವಾರ್ಷಿಕ 1 ಸಾವಿರ ಕೋಟಿ ರೂ. ಉಳಿತಾಯವಾಗಲಿದೆ ಎಂದು ಕೇಂದ್ರ ಸರಕಾರ ಸುಪ್ರಿಂ ಕೋರ್ಟ್‌ಗೆ ತಿಳಿಸಿದೆ.

ರಾಷ್ಟ್ರಪತಿ ಭವನದಿಂದ ಇಂಡಿಯಾ ಗೇಟ್‌ವರೆಗಿನ 3 ಕಿ.ಮೀ ಮಾರ್ಗದ ಸೌಂದರ್ಯೀಕರಣ ಹಾಗೂ ಸಂಸತ್ ಭವನ ನಿರ್ಮಾಣದ 'ಸೆಂಟ್ರಲ್ ವಿಸ್ತಾ' ಯೋಜನೆಯ ಅಂದಾಜು ಮೊತ್ತ 20 ಸಾವಿರ ಕೋಟಿ ರೂ. ಆಗಿದೆ. ಈ ಯೋಜನೆ ಬಗ್ಗೆ ತಕರಾರು ಅರ್ಜಿಗಳು ಸಲ್ಲಿಕೆಯಾದ ಹಿನ್ನೆಲೆಯಲ್ಲಿ ಕೇಂದ್ರವು ಸುಪ್ರೀಂಕೋರ್ಟ್‌ಗೆ ವರದಿ ಸಲ್ಲಿಸಿದೆ.

''ಸ್ವಾತಂತ್ರ್ಯ ಬಂದು 73 ವರ್ಷವಾದರೂ ವಿವಿಧ ಸಚಿವಾಲಯಗಳು ಬಾಡಿಗೆ ಕಟ್ಟಡದಲ್ಲಿ ಕಾರ್ಯ ನಿರ್ವಹಿಸುತ್ತಿವೆ. ಇದಕ್ಕಾಗಿಯೇ ವರ್ಷಕ್ಕೆ ಒಂದು ಸಾವಿರ ಕೋಟಿ ರೂ. ವ್ಯಯಿಸಲಾಗುತ್ತಿದೆ. ಹೊಸ ಸಂಸತ್ ಭವನ ನಿರ್ಮಾಣದಿಂದ ಎಲ್ಲ ಸಚಿವಾಲಯಗಳು ಒಂದೇ ಕಟ್ಟಡದಲ್ಲಿ ಕಾರ್ಯ ನಿರ್ವಹಿಸಲಿವೆ. ಇದರಿಂದ ಬಾಡಿಗೆ ಉಳಿತಾಯದ ಜತೆಗೆ ಸಚಿವಾಲಯಗಳ ನಡುವೆ ಪರಸ್ಪರ ಸಮನ್ವಯ ಏರ್ಪಟ್ಟು ಉತ್ತಮ ಆಡಳಿತಕ್ಕೂ ಅನುಕೂಲವಾಗಲಿದೆ,'' ಎಂದು ಹೇಳಿದೆ.

ಪರಿಸರ ಸಂರಕ್ಷಣೆಯನ್ನು ಗಮನದಲ್ಲಿರಿಸಿಕೊಂಡು ಯೋಜನೆ ಸಿದ್ಧಪಡಿಸಲಾಗಿದೆ ಎಂದು ವರದಿ ಸಲ್ಲಿಸಿದ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಅವರು ನ್ಯಾಯಮೂರ್ತಿ ಎ.ಎಂ. ಖಾನ್ವಿಲ್ಕರ್ ಪೀಠಕ್ಕೆ ತಿಳಿಸಿದರು. ಹಾಲಿ ಸಂಸತ್ ಕಟ್ಟಡವನ್ನು 1927ರಲ್ಲಿ ನಿರ್ಮಿಸಲಾಗಿದ್ದು, ಅದರ ಮೇಲೆ ಭಾರಿ ಒತ್ತಡ ಬಿದ್ದಿದೆ. ಅಗ್ನಿ ಸುರಕ್ಷತೆಯೂ ಸೇರಿದಂತೆ ಹಲವು ಸಮಸ್ಯೆಗಳನ್ನು ಎದುರಿಸಿದ್ದು, ಹೊಸ ಕಟ್ಟಡದ ಅಗತ್ಯವಿದೆ ಎಂದು ಹೇಳಿದರು.

ಹೊಸ ಸಂಸತ್ ಭವನ ಕಟ್ಟಡ ನಿರ್ಮಾಣಕ್ಕೆ ಇದೇ ಡಿಸೆಂಬರ್‌ನಲ್ಲಿ ರಾಷ್ಟ್ರಪತಿ ರಾಮನಾಥ್ ಕೋವಿಂದ್ ಮತ್ತು ಪ್ರಧಾನಿ ನರೇಂದ್ರ ಮೋದಿ ಅವರು ಶಂಕುಸ್ಥಾಪನೆ ನೆರವೇರಿಸುವ ಸಾಧ್ಯತೆ ಇದೆ. 2022ರ ಅಕ್ಟೋಬರ್ ಅಂತ್ಯದ ವೇಳೆಗೆ ಕಾಮಗಾರಿ ಪೂರ್ಣಗೊಳಿಸುವ ಗುರಿ ಹೊಂದಲಾಗಿದೆ. ಟಾಟಾ ಪ್ರಾಜೆಕ್ಟ್ ಕಾಮಗಾರಿ ಗುತ್ತಿಗೆ ಪಡೆದಿದೆ.